**ಸಾಕ್ಷಿಗೆ ದಿನಾಂಕ:17-06-2026 ರಂದು ಪ್ರಮಾಣವಚನ ಬೋಧಿಸಲಾಯಿತು.**

**:: ಮುಖ್ಯ ವಿಚಾರಣೆ :: ವಾದಿ ಪರ ಶ್ರೀ. CSS ವಕೀಲರಿಂದ ::**

ನಾನು ಮುಖ್ಯ ವಿಚಾರಣೆಯನ್ನು ಪ್ರಮಾಣಪತ್ರದ ಮೂಲಕ ಸಲ್ಲಿಸುತ್ತಿದ್ದು, ಪ್ರಮಾಣಪತ್ರದಲ್ಲಿ ಹೇಳಿರುವ ಸಂಗತಿಗಳೆಲ್ಲವೂ ಸತ್ಯವಾಗಿದೆ ಎಂದು ಪ್ರಮಾಣೀಕರಿಸುತ್ತೇನೆ. ಪ್ರಮಾಣಪತ್ರವನ್ನು ನಾನು ಓದಿ ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ಈ ಪ್ರಕರಣದಲ್ಲಿ ನಾನು ಹಾಜರುಪಡಿಸಿರುವ ದಾಖಲೆಗಳನ್ನು ಈಗ ನೋಡುತ್ತಿದ್ದೇನೆ, ಅವುಗಳನ್ನು ಈ ಕೆಳಕಂಡಂತೆ ಗುರುತಿಸಲಾಯಿತು.

| Sl.No. | Documents | Exhibits |
|---|---|---|
| 1 | 9 ಪೋಟೋಗಳು | Ex.P-59 ರಿಂದ 68 |
| 2 | 1 ಸಿಡಿ | Ex.P-69 |

ಆದುದರಿಂದ ದಾವೆಯಲ್ಲಿ ಕೋರಿಕೊಂಡಂತೆ ದಾವೆಯನ್ನು ಡಿಕ್ರಿ ಮಾಡಿಕೊಡಬೇಕೆಂದು ಕೋರಿಕೊಳ್ಳುತ್ತೇನೆ.

**:: ಪಾಟೀ ಸವಾಲು :: ಪ್ರತಿವಾದಿಗಳ ಪರ ಶ್ರೀ MKT ವಕೀಲರಿಂದ ::**

ನನ್ನ ತಂದೆ ಜೀವಂತವಾಗಿದ್ದ ಸಮಯದಲ್ಲಿ ಕುಟುಂಬದ ಆಸ್ತಿಗಳ ವ್ಯವಹಾರಗಳನ್ನು ಅವರೇ ನೋಡಿಕೊಳ್ಳುತ್ತಿದ್ದರು ಎಂದರೆ ಸರಿ. ದಾವಾ ಶೆಡ್ಯೂಲ್ ಸ್ವತ್ತಿನ ಬಗ್ಗೆ ಏನೆಲ್ಲಾ ವ್ಯವಹಾರಗಳು ಪ್ರತಿವಾದಿ ಜೊತೆ ಆಗಿರುತ್ತದೆ ಎಂದು ನಾನು ತಿಳಿದುಕೊಂಡಿರುತ್ತೇನೆ. ದಾವಾ ಶೆಡ್ಯೂಲ್ ಸ್ವತ್ತನ್ನು ನನ್ನ ತಂದೆಯಿಂದ ಪ್ರತಿವಾದಿಗಳು/ಸರ್ಕಾರದವರು ಸಾರ್ವಜನಿಕ ಉಪಯೋಗಕ್ಕೆ ಭೂ ಸ್ವಾಧೀನಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಭೂ ಸ್ವಾಧೀನಕ್ಕೆ ಸಂಬಂಧಪಟ್ಟಂತೆ ನಾನು ತಿಳಿದುಕೊಂಡಿದ್ದು, ನನ್ನ ಪ್ರಕಾರ ಸರ್ಕಾರದಿಂದ ಯಾವುದೇ ಭೂ ಸ್ವಾಧೀನ ಮಾಡಿಕೊಂಡಿರುವುದಿಲ್ಲ. ದಾವಾ ಶೆಡ್ಯೂಲ್ ಸ್ವತ್ತನ್ನು ಸರ್ಕಾರದವರು ಹಿಂದೆಯೇ ಭೂಾ ಸ್ವಾಧೀನಪಡಿಸಿಕೊಂಡಿದ್ದರು ಇಲ್ಲ ಎಂದು ನ್ಯಾಯಾಲಯದಲ್ಲಿ ಸುಳ್ಳು ಸಾಕ್ಷ್ಯವನ್ನು ನುಡಿಯುತ್ತಿದ್ದೇನೆಂದರೆ ಸರಿಯಲ್ಲ. ಆ ರೀತಿ ದಾವಾ

ಶೆಡ್ಯೂಲ್ ಸ್ವತ್ತನ್ನು ಸರ್ಕಾರದವರು ಭೂ ಸ್ವಾಧೀನಪಡಿಸಿಕೊಂಡ ನಂತರದಲ್ಲಿ ಅಲ್ಲಿ ಹಲವಾರು ಶೆಡ್ ಗಳನ್ನು ನಿರ್ಮಾಣ ಮಾಡಿ ಸಾರ್ವಜನಿಕರ ಉಪಯೋಗಕ್ಕೆ ಕಾಯ್ದಿರಿಸಿರುತ್ತಾರೆ ಎಂದರೆ ಸರಿಯಲ್ಲ. ದಾವಾ ಶೆಡ್ಯೂಲ್ ಸ್ವತ್ತು ಪ್ರಸ್ತುತದಲ್ಲಿ ನಮ್ಮ ಕುಟುಂಬದಲ್ಲಿ ಉಳಿದಿರುವುದಿಲ್ಲ ಅದು ಪ್ರತಿವಾದಿಗೆ ಸೇರಿದ ಸ್ವತ್ತು ಆಗಿರುತ್ತದೆ ಎಂದರೆ ಸರಿಯಲ್ಲ. ದಾವಾ ಶೆಡ್ಯೂಲ್ ಸ್ವತ್ತಿನ ಭೂ ಸ್ವಾಧೀನಕ್ಕೆ ಸಂಬಂಧಪಟ್ಟಂತೆ ನನ್ನ ತಂದೆ ಹಿಂದೆಯೇ ಸರ್ಕಾರದಿಂದ ಪರಿಹಾರ ಹಣ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಪ್ರಸ್ತುತದಲ್ಲಿ ದಾವಾ ಶೆಡ್ಯೂಲ್ ಸ್ವತ್ತಿನ ಮಾರುಕಟ್ಟೆ ಬೆಲೆ ಹೆಚ್ಚಾಗಿರುವ ಕಾರಣ ದುರುದ್ದೇಶದಿಂದ ದಾವಾ ಶೆಡ್ಯೂಲ್ ಸ್ವತ್ತನ್ನು ನಮ್ಮ ಸ್ವತ್ತು ಎಂದು ಇನ್ನು ಸಹ ಪ್ರತಿಪಾದಿಸುತ್ತಾ ಬಂದಿರುತ್ತೇವೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕ ಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇ ಎ ಒ

sd/-

ಪ್ರಧಾನ ಸಿ.ಜೆ ಮತ್ತು ಜೆ.ಎಂ.ಎಫ್.ಸಿ.

ತರೀಕೆರೆ.

ಸಾಕ್ಷಿಯ ಸಹಿ: